ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/83/2015-16.                ದಿನಾಂಕ:06-09-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಪಿಂಜಾರ್ ಹುಸೇನ್ ಸಾಬ್<br>2)ಕಾಳಮ್ಮ ಗಂಡ ಲೇಟ್ ಕೊಟ್ರಪ್ಪ<br>ನಾಗರಕಟ್ಟೆ ಗ್ರಾಮ ಕೂಡ್ಲಿಗಿ ತಾಲೂಕು | ಸುಭಾನ್ ಸಾಬ್ ತಂದೆ ದೊಡ್ಡ ಹುಸೇನ್ ಸಾಬ್<br>ನಾಗರಕಟ್ಟೆ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ನಾಗರಕಟ್ಟೆ ಗ್ರಾಮದ ಸನಂ 342. ವಿಸ್ತೀರ್ಣ 5-57.ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ನಾಗರಕಟ್ಟೆ ಗ್ರಾಮದ ಸನಂ 342. ವಿಸ್ತೀರ್ಣ 5-57.ಎಕ್ರೆ ಜಮೀನನ್ನು ಸದರಿ ಗ್ರಾಮದ ಕಾಳಮ್ಮ ಗಂಡ ಲೇಟ್ ಕೊಟ್ರಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ನಾಗರಕಟ್ಟೆ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 19-08-2015. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಸುಭಾನ್ ಸಾಬ್ ತಂದೆ ದೊಡ್ಡ ಹುಸೇನ್ ಸಾಬ್ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 08/2015-16. ದಿನಾಂಕ 18-09-2015. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 29-12-2015 ರಿಂದ 06-09-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ನಾಗರಕಟ್ಟೆ ಗ್ರಾಮದ ಸನಂ 342. ವಿಸ್ತೀರ್ಣ 5-57.ಎಕ್ರೆ ಜಮೀನು ನಮ್ಮ ತಂದೆಯವರಾದ ಹಾಲಪ್ಪ ತಂದೆ ಈರಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 07-10-1990 ರಂದು ಹಾಗೂ ನಮ್ಮ ತಾಯಿಯವರಾದ ಹಾಲಮ್ಮ ಗಂಡ ಈರಪ್ಪ ಇವರು ದಿನಾಂಕ 23-06-1982 ರಂದು ಹಾಗೂ ನನ್ನ ಗಂಡನಾದ ಕೊಟ್ರಪ್ಪ ಇವರು ದಿನಾಂಕ 21-06-1991 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನು ಪೋತಿವಾರಸು ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನನ್ನ ಯಾವ ತಕರಾರು ಇಲ್ಲವೆಂದು ತಿಳಿಸಿರುತ್ತಾರೆ.

ಪು.ತಿ.ನೋ:-2

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ **ಲೆಕ್ಕ**ಗಳನ್ನು ಪರಿಶೀಲಿಸಿ ಅರ್ಜಿದಾರರು ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ತಕರಾರುದಾರರು ತಮ್ಮ ತಕರಾರು ಏನು ಇಲ್ಲವೆಂದು ತಿಳಿಸಿರುತ್ತಾರೆ. ಕಾರಣ ಅರ್ಜಿದಾರರ ಕೋರಿಕೆಯನ್ವಯ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ನಾಗರಕಟ್ಟೆ ಗ್ರಾಮದ ಸನಂ 342. ವಿಸ್ತೀರ್ಣ 5–57.ಎಕ್ರೆ ಜಮೀನನ್ನು ಪೋತಿವಾರಸು ಹಕ್ಕಿನ ಪ್ರಕಾರ ಹಾಲಪ್ಪ ತಂದೆ ಈರಪ್ಪ ಇವರ ಹೆಸರನ್ನು ಕಡಿಮೆ ಮಾಡಿ ಅರ್ಜಿದಾರರಾದ ಕಾಳಮ್ಮ ಗಂಡ ಲೇಟ್ ಕೊಟ್ರಪ್ಪ ಇವರ ಹೆಸರನ್ನು ಪೂರ್ವ ಪಟ್ಟದಾರರ ಜೊತೆ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 06–09–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಕೊಟ್ಟೂರು

ಉಪ ತಹಶೀಲ್ದಾರರು
ನಾಡ ಕಾರ್ಯಾಲಯ
ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕಾಳಮ್ಮ ಗಂಡ ಲೇಟ್ ಕೊಟ್ರಪ್ಪ, ಪಿಂಜಾರ ಹುಸೇನ್ ಸಾಬ್. ನಾಗರಕಟ್ಟೆ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಸುಭಾನ್‌ಸಾಬ್ ತಂದೆ ದೊಡ್ಡ ಹುಸೇನ್ ಸಾಬ್ ನಾಗರಕಟ್ಟೆ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.